ಕರ್ನಾಟಕ ಸರ್ಕಾರ
Government of Karnataka

ರಾಜ್ಯ ಶಿಕ್ಷಣ ಸಂಶೋಧನೆ ಮತ್ತು ತರಬೇತಿ ಇಲಾಖೆ
DEPARTMENT OF STATE EDUCATIONAL RESEARCH AND TRAINING
No 4, 100 FT RING ROAD, BANASHANKARI 3 RD STAGE BENGALURU - 560 085
Email: dpi.dsert-ka@nic.in Website: http://dsert.kar.nic.in

Phone 080 26980100
Fax 080 26422377

ಸಂಖ್ಯೆ:ರಾ.ಶಿ.ನೀತಿ/ಪ.ಶೈ.ಯೋ/05/2020-21 ದಿನಾಂಕ: 30/03/2021

# ಜ್ಞಾಪನ

ವಿಷಯ:- ಏಪ್ರಿಲ್ 2021ರ ಮಾಹೆಯ ಪರ್ಯಾಯ ಶೈಕ್ಷಣಿಕ ಯೋಜನೆಯನ್ನು ಶಾಲೆಗಳಲ್ಲಿ ಅಳವಡಿಸಿಕೊಳ್ಳುವ ಬಗ್ಗೆ.

ಉಲ್ಲೇಖ:- ಸಮಗ್ರ ಶಿಕ್ಷಣ ಕರ್ನಾಟಕ ಕಛೇರಿ ಪತ್ರ ಸಂಖ್ಯೆ:ಸಶಿಕ/ಕ.ಸಂ.ಕಾ/2020-21 ದಿನಾಂಕ:24/12/2020.

********

ವಿಷಯ ಹಾಗೂ ಉಲ್ಲೇಖಕ್ಕೆ ಸಂಬಂಧಿಸಿದಂತೆ, ಮಾರ್ಚ್2021ರ 10ನೇ ತರಗತಿ ಮತ್ತು 6ರಿಂದ 9ನೇ ತರಗತಿಗಳ ವಿದ್ಯಾಗಮ ತರಗತಿಗಳಿಗೆ ಪರ್ಯಾಯ ಶೈಕ್ಷಣಿಕ ಯೋಜನೆಯನ್ನು ತರಗತಿವಾರು, ವಿಷಯವಾರು ಕನ್ನಡ ಮತ್ತು ಆಂಗ್ಲ ಮಾಧ್ಯಮದಲ್ಲಿ ಸಿದ್ಧಪಡಿಸಿ ಡಿ.ಎಸ್.ಇ.ಆರ್.ಟಿ. ವೆಬ್‌ಸೈಟ್ (www.dsert.kar.nic.in) ನಲ್ಲಿ ಅಪ್‌ಲೋಡ್ ಮಾಡಲಾಗಿತ್ತು. ಇದೇ ಮಾದರಿಯಲ್ಲಿ ಏಪ್ರಿಲ್ 2021ರ ಮಾಹೆಯ ಪರ್ಯಾಯ ಶೈಕ್ಷಣಿಕ ಯೋಜನೆಯನ್ನು ಸಿದ್ಧಪಡಿಸಿ ಡಿ.ಎಸ್.ಇ.ಆರ್.ಟಿ. ವೆಬ್‌ಸೈಟ್ (www.dsert.kar.nic.in) ನಲ್ಲಿ ಅಪ್‌ಲೋಡ್ ಮಾಡಲಾಗಿದೆ. ಶಾಲಾ ಶಿಕ್ಷಣದ ವೆಬ್‌ಸೈಟ್ schooleducation.kar.nic.inನ ಬಲಭಾಗದ ಇಲಾಖೆಗಳ ಮಾಹಿತಿ ಲಿಂಕ್ ಶೀರ್ಷಿಕೆಯಡಿಯಲ್ಲಿ ಡಿ.ಎಸ್.ಇ.ಆರ್.ಟಿ. ಎಂದು ಆಯ್ಕೆ ಮಾಡಿದಾಗ ಡಿ.ಎಸ್.ಇ.ಆರ್.ಟಿ. ವೆಬ್‌ಸೈಟ್‌ನಲ್ಲಿ ಪರ್ಯಾಯ ಶೈಕ್ಷಣಿಕ ಯೋಜನೆಯ ಮಾಹಿತಿಯು ಲಭ್ಯವಿರುತ್ತದೆ. ಏಪ್ರಿಲ್ ತಿಂಗಳ ಕಲಿಕಾ ಬೋಧನಾ ಪ್ರಕ್ರಿಯೆಯಲ್ಲಿ ಪರ್ಯಾಯ ಶೈಕ್ಷಣಿಕ ಯೋಜನೆಯನ್ನು ಅಳವಡಿಸಿಕೊಳ್ಳಲು ತಿಳಿಸಿದೆ.

30/3/2021

ನಿರ್ದೇಶಕರು,
ಡಿ.ಎಸ್.ಇ.ಆರ್.ಟಿ
ಬೆಂಗಳೂರು

30/3/2

ಇವರಿಗೆ,

1. ರಾಜ್ಯದ ಎಲ್ಲಾ ಉಪನಿರ್ದೇಶಕರು(ಅಭಿವೃದ್ಧಿ) ಹಾಗೂ ಉಪನಿರ್ದೇಶಕರು(ಆಡಳಿತ) ಇವರಿಗೆ ಅಗತ್ಯ ಕ್ರಮಕ್ಕಾಗಿ.
2. ರಾಜ್ಯದ ಎಲ್ಲಾ ಕ್ಷೇತ್ರ ಶಿಕ್ಷಣಾಧಿಕಾರಿಗಳಿಗೆ ಅಗತ್ಯ ಕ್ರಮಕ್ಕಾಗಿ.

ಪ್ರತಿಯನ್ನು,

1. ಮಾನ್ಯ ಆಯುಕ್ತರು, ಸಾರ್ವಜನಿಕ ಶಿಕ್ಷಣ ಇಲಾಖೆ ಬೆಂಗಳೂರುರವರಿಗೆ ಗೌರವಪೂರ್ವಕ ವಂದನೆಗಳೊಂದಿಗೆ ಮಾಹಿತಿಗಾಗಿ ಸಲ್ಲಿಸಿದೆ.
2. ರಾಜ್ಯ ಯೋಜನಾ ನಿರ್ದೇಶಕರು, ಸಮಗ್ರ ಶಿಕ್ಷಣ ಕರ್ನಾಟಕ ಬೆಂಗಳೂರುರವರಿಗೆ ಗೌರವಪೂರ್ವಕ ವಂದನೆಗಳೊಂದಿಗೆ ಮಾಹಿತಿಗಾಗಿ ಸಲ್ಲಿಸಿದೆ.

D:\i5-96\NEP-2021-22\AAC-2021\NEP-KTBS letter.docx